## 5. ಅಧಿವೇಶನಕ್ಕೆ ಸೂಕ್ತ ಸ್ಥಳ ಪರಿಶೀಲಿಸಲು ಅಧಿಕಾರಿಗಳಿಗೆ ಸ್ಪೀಕರ್ ಸೂಚನೆ



**ಸೆಪ್ಟೆಂಬರ್ 2020 ರಲ್ಲಿ ಕರ್ನಾಟಕ ವಿಧಾನ ಸಭೆಯ ಅಧಿವೇಶನವನ್ನು ರಾಜ್ಯದಲ್ಲಿ ಕೊರೋನಾ ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ಯಾವ ರೀತಿ ನಡೆಸಬಹುದು ಎಂಬ ಬಗ್ಗೆ ದಿನಾಂಕ 23–08–2020 ರಂದು ಸನ್ಮಾನ್ಯ ಸಭಾಧ್ಯಕ್ಷರು, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಹಾಗೂ ಸರ್ಕಾರದ ಮುಖ್ಯ ಕಾರ್ಯದರ್ಶಿ ಅವರೊಂದಿಗೆ ವಿಧಾನ ಸಭೆಯ ಸಭಾಂಗಣವನ್ನು ವೀಕ್ಷಿಸಿ, ಚರ್ಚಿಸುತ್ತಿರುವುದು.**



**ಸೆಪ್ಟೆಂಬರ್ 2020 ರಲ್ಲಿ ಕರ್ನಾಟಕ ವಿಧಾನ ಸಭೆಯ ಅಧಿವೇಶನವನ್ನು ರಾಜ್ಯದಲ್ಲಿ ಕೊರೋನಾ ವೈರಸ್ ಹರಡುತ್ತಿರುವ ಹಿನ್ನೆಲೆಯಲ್ಲಿ ಯಾವ ರೀತಿ ನಡೆಸಬಹುದು ಎಂಬ ಬಗ್ಗೆ ದಿನಾಂಕ27–08–2020 ರಂದು ಸನ್ಮಾನ್ಯ ಸಭಾಧ್ಯಕ್ಷರು, ಸರ್ಕಾರಿ ಮುಖ್ಯ ಸಚೇತಕರು, ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಜಾತ್ಯಾತೀತ ಜನತಾ ದಳದ ಮುಖ್ಯ ಸಚೇತಕರೊಂದಿಗೆ ವಿಧಾನ ಸಭೆಯ ಸಭಾಂಗಣವನ್ನು ವೀಕ್ಷಿಸಿ, ಚರ್ಚಿಸುತ್ತಿರುವುದು.**

ಸಾಮಾಜಿಕ ಅಂತರ ಕಾಯ್ದುಕೊಂಡು ವಿಧಾನಸಭೆಯಲ್ಲಿ ಮುಂದಿನ ಅಧಿವೇಶನ ನಡೆಸಲು ವ್ಯವಸ್ಥೆ ಮಾಡಿಕೊಳ್ಳಬೇಕು. ಇಲ್ಲದಿದ್ದರೆ ಬೇರೆ ಎಲ್ಲಾದರೂ ಇದಕ್ಕಿಂತ ವಿಶಾಲ ಸ್ಥಳವಿದೆಯೇ ಎಂಬ ಬಗ್ಗೆ ಸೂಕ್ತ ಪರಿಶೀಲನೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚಿಸಿದ್ದಾರೆ.

ಕಳೆದ ಮಾರ್ಚ್‌ನಲ್ಲಿ ಅಧಿವೇಶನ ನಡೆಸಲಾಗಿದ್ದು, ಸಂವಿಧಾನದ ಅವಕಾಶದಂತೆ 6 ತಿಂಗಳ ಅಂತರವಿಲ್ಲದಂತೆ ಕಲಾಪ ನಡೆಸಬೇಕಾಗಿದೆ. ಸೆಪ್ಟೆಂಬರ್ 23ರ ಒಳಗೆ ವಿಧಾನಮಂಡಲ ಅಧಿವೇಶನ ಕರೆಯಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಸಭಾಧ್ಯಕ್ಷರು ಸಭೆ ನಡೆಸಿದರು. ಜೊತೆಗೆ ವಿಧಾನಸಭೆಯಲ್ಲಿ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಸಾಧ್ಯವೇ ಎಂಬ ಬಗ್ಗೆಯೂ ಪರಿಶೀಲಿಸಿದರು. ಸದನದಲ್ಲಿ ಸಚಿವ ಸಂಪುಟದ ಸದಸ್ಯರು, ಶಾಸಕರು, ಅಧಿಕಾರಿಗಳು ಹಾಗೂ ಮಾಧ್ಯಮದವರ ಆರೋಗ್ಯಕ್ಕೆ ಕೋವಿಡ್–19 ತಗುಲದಂತೆ ಕ್ರಮ ವಹಿಸುವುದು ಹೇಗೆ ಎಂಬುದರ ಬಗ್ಗೆ ಪರಿಶೀಲನೆ ಕೈಗೊಂಡರು.

ವಿಧಾನಸೌಧದ ಮೊದಲ ಮಹಡಿಯಲ್ಲಿರುವ ವಿಧಾನಸಭಾ ಸಭಾಂಗಣದಲ್ಲಿ ಪ್ರಸ್ತುತ ಇರುವ ಆಸನ ವ್ಯವಸ್ಥೆಗಳ ನಡುವೆ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಗಾಜಿನ ಕವಚಗಳನ್ನು ಅಳವಡಿಸಿದರೆ ಹೇಗೆ ಎಂದು ಯೋಚಿಸಲಾಗುತ್ತಿದೆ. ಸದನಕ್ಕೆ ಆಗಮಿಸುವ ಸಿಎಂ ಒಳಗೊಂಡಂತೆ ಅವರ ಸಂಪುಟದ ಎಲ್ಲ ಸದಸ್ಯರು, ಪ್ರತಿಪಕ್ಷ ನಾಯಕರು, ಸದನದ ಎಲ್ಲ ಸದಸ್ಯರು ಮಾಸ್ಕ್ ಧರಿಸಿ ಬರಲು ವಿನಂತಿಸಿಕೊಳ್ಳಲಾಗುತ್ತದೆ ಎಂದರು.

ಲೋಕಸಭೆ ಮತ್ತು ರಾಜ್ಯಸಭೆ ಹಾಗೂ ಇತರ ರಾಜ್ಯಗಳ ವಿಧಾನಮಂಡಲ ಸಮಾವೇಶಗೊಳ್ಳಲು ಯಾವ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಮಾಹಿತಿ ಪಡೆಯಲು ಅಧಿಕಾರಿಗಳಿಗೆ ಸೂಚಿಸಲಾಗಿದೆ. ಮುಂದಿನ ವಾರ ಸಂಸದೀಯ ವ್ಯವಹಾರಗಳ ಸಚಿವರು, ಮುಖ್ಯ ಕಾರ್ಯದರ್ಶಿ ಹಾಗೂ ಇತರ ಹಿರಿಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಸ್ಥಳ ನಿಷ್ಕರ್ಷೆ ಮಾಡಲಾಗುವುದು ಎಂದು ತಿಳಿಸಿದರು.

ಕೋವಿಡ್–19 ಉಪಟಳ ಎಲ್ಲೆಡೆ ವ್ಯಾಪಿಸುತ್ತಿರುವ ಕಾರಣ ಅಧಿವೇಶನವನ್ನು ನಡೆಸುವುದು ಹೇಗೆ ಎಂಬ ಬಗ್ಗೆ ನಾನಾ ಸ್ತರಗಳಲ್ಲಿ ವಿಸ್ತೃತ ಚರ್ಚೆ ನಡೆಯುತ್ತಿದೆ. ವಿಧಾನಸೌಧ ಹೊರತುಪಡಿಸಿ ಬೇರೆಲ್ಲಾದರೂ ಅಧಿವೇಶನ ನಡೆಸಲು ಸೂಕ್ತ ಸ್ಥಳ ಇದೆಯೇ ಎಂಬ ಬಗ್ಗೆಯೂ ಪರಿಶೀಲಿಸಲಾಗುತ್ತಿದೆ ಎಂದು ಸಭಾಧ್ಯಕ್ಷರು ತಿಳಿಸಿದರು.

ಆಧಾರ:ವಿಜಯಕರ್ನಾಟಕ, ದಿನಾಂಕ:07.08.2020